## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ರಾಜ್ಯದ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಪಾವತಿಸಲು ಬಾಕಿ ಇರುವ ಗೌರವ ಧನಗಳನ್ನು ಬಿಡುಗಡೆಗೊಳಿಸುವ ಕುರಿತು.**

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 75 ಜಿಪಸ 2014, ದಿನಾಂಕ: 06.12.2014
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 75 ಜಿಪಸ 2014(2), ದಿನಾಂಕ: 27.04.2015
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 75 ಜಿಪಸ 2014, ದಿನಾಂಕ: 01.10.2015
4. ಸರ್ಕಾರದ ಅರೆ ಸರ್ಕಾರಿ ಪತ್ರಗಳು ಸಂಖ್ಯೆ: ಗ್ರಾಅಪ 75 ಜಿಪಸ 2014, ದಿನಾಂಕ:05.08.2015 ಮತ್ತು 03.11.2015

**ಪ್ರಸ್ತಾವನೆ:**

2014–15ನೇ ಆರ್ಥಿಕ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ "ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ನೀಡುತ್ತಿದ್ದ ಗೌರವಧನವನ್ನು" ದಿನಾಂಕ:01.04.2014ರಿಂದ ಅನ್ವಯವಾಗುವಂತೆ ಇಮ್ಮಡಿಗೊಳಿಸಿ ಓದಲಾದ (1)ರ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ.

ಇಮ್ಮಡಿಗೊಳಿಸಲಾದ ದರಗಳನ್ವಯ ಮೂರು ಹಂತದ ಪಂಚಾಯತ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಜನವರಿ'2015ರ ಮಾಹೆಯಿಂದ ಪ್ರಾರಂಭಿಸಿ ಸರ್ಕಾರದಿಂದ ಬಿಡುಗಡೆಗೊಳಿಸಲಾಗುತ್ತಿದೆ. ಅದರಂತೆ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಜನವರಿ'2015ರಿಂದ ಮಾರ್ಚ್'2015ರ ಮೂರು ತಿಂಗಳ ಅವಧಿಗೆ ಓದಲಾದ (2)ರ ಸರ್ಕಾರದ ಆದೇಶದ ಮೂಲಕ ಹಾಗು ಏಪ್ರಿಲ್'2015ರ ಮಾಹೆಯಿಂದ ಸೆಪ್ಟೆಂಬರ್'2015ರವರೆಗಿನ ಆರು ತಿಂಗಳುಗಳ ಅವಧಿಗೆ ಓದಲಾದ (3)ರ ಸರ್ಕಾರದ ಆದೇಶದ ಮೂಲಕ ಗೌರವಧನಗಳನ್ನು ಸರ್ಕಾರದಿಂದ ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ಡಿಸೆಂಬರ್'2014ರಿಂದ ಹಿಂದಿನ ಅವಧಿಗೆ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ (ಇಮ್ಮಡಿಗೊಳಿಸುವ ಪೂರ್ವದಲ್ಲಿ ಇದ್ದ ಹಾಗು ಇಮ್ಮಡಿಗೊಳಿಸಿದ ನಂತರದ ಬಾಕಿಗಳು) ಪಾವತಿಸಲು ಬಾಕಿ ಇರುವ ಗೌರವಧನದ ಜಿಲ್ಲಾವಾರು ವಿವರಗಳನ್ನು ಪಡೆಯಲಾಗಿದ್ದು, ಅದರಂತೆ ದಿನಾಂಕ:19.11.2015ರ ಅಂತ್ಯಕ್ಕೆ ರಾಜ್ಯದ ಐದು ಜಿಲ್ಲೆಗಳಾದ ಬೆಂಗಳೂರು ನಗರ, ಹಾಸನ, ಕೊಡಗು, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ 25 ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತವು ಒಟ್ಟು ರೂ.53.27 ಕೋಟಿಗಳಾಗಿರುತ್ತದೆ.

ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಪಾವತಿಸಲು ಬಾಕಿ ಇರುವ ಎಲ್ಲಾ ಗೌರವಧನಗಳನ್ನು ಗ್ರಾಮ ಪಂಚಾಯತಿಗಳ ಸ್ವಂತ ಸಂಪನ್ಮೂಲದಿಂದ ವೆಚ್ಚ ಭರಿಸಿ ಪಾವತಿಸುವಂತೆ ಓದಲಾದ(4)ರ ಅರೆ ಸರ್ಕಾರಿ ಪತ್ರಗಳ ಮೂಲಕ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆಗಳನ್ನು ನೀಡಿದ್ದಾಗ್ಯೂ ಸಹ ಗ್ರಾಮ ಪಂಚಾಯತಿಗಳಲ್ಲಿ ಸ್ವಂತ ಸಂಪನ್ಮೂಲ ಸಂಗ್ರಹಣೆಯ ಕೊರತೆಯಿಂದಾಗಿ ಬಾಕಿ ಗೌರವಧನಗಳನ್ನು ನಿಗಧಿತ ಕಾಲಾವಧಿಯಲ್ಲಿ ಪಾವತಿಸಲು ಸಾಧ್ಯವಾಗಿರುವುದಿಲ್ಲ.

ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ಅದರಲ್ಲೂ ವಿಶೇಷವಾಗಿ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಪಾವತಿಸಲು ಬಾಕಿ ಇರುವ ಗೌರವಧನದ ವಿಷಯಗಳು ಪ್ರತಿ ಅಧಿವೇಶನದ ಸಂದರ್ಭದಲ್ಲಿ ವಿಧಾನ ಮಂಡಲದ ಉಭಯ ಸದನಗಳಲ್ಲಿ ಪದೇ ಪದೇ ಚರ್ಚೆಗೆ ಬರುತ್ತಿದೆ. ಆದುದರಿಂದ ಮೂರು ಹಂತದ ಪಂಚಾಯತ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪಾವತಿಸಲು ಬಾಕಿ ಇರುವ ಗೌರವಧನದ ವಿಷಯವನ್ನು ಆದ್ಯತೆಯ ಮೇರೆಗೆ ಪರಿಗಣಿಸಿ ಕ್ರಮವಹಿಸುವ ಅಗತ್ಯವಿರುತ್ತದೆ.

ಈ ಹಿನ್ನೆಲೆಯಲ್ಲಿ, ದಿನಾಂಕ:19.11.2015ರ ಅಂತ್ಯಕ್ಕೆ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಪಾವತಿಸಲು ಬಾಕಿ ಇರುವ ಗೌರವಧನದ ಒಟ್ಟು ಮೊತ್ತ ರೂ. 53.27 ಕೋಟಿಗಳನ್ನು ಅತ್ಯಂತ ತ್ವರಿತವಾಗಿ ಪಾವತಿಸುವ ಉದ್ದೇಶದಿಂದ ರೂ.33.27 ಕೋಟಿಗಳ ಅನುದಾನ ಒದಗಿಸುವ ಪ್ರಸ್ತಾವನೆಗೆ ಮಾನ್ಯ ಮುಖ್ಯ ಮಂತ್ರಿಗಳು ಒಪ್ಪಿಗೆ ಸೂಚಿಸಿರುತ್ತಾರೆ. ಇನ್ನುಳಿದ ರೂ.20.00 ಕೋಟಿಗಳನ್ನು ಆಡಳಿತ ಇಲಾಖೆ ವ್ಯಾಪ್ತಿಯ ಮೂರು ಹಂತದ ಪಂಚಾಯತ್ ಸಂಸ್ಥೆಗಳಲ್ಲಿ ವಿವಿಧ ಯೋಜನೆಗಳಡಿ ವಿನಿಯೋಗವಾಗದೇ ಬಾಕಿ ಉಳಿದಿರುವ ಮೊತ್ತ ಮತ್ತು ಆಕರಣೆಯಾಗಿರುವ ಬಡ್ಡಿ ಮೊತ್ತಗಳಿಂದ ವೆಚ್ಚ ಭರಿಸಿ ಪಾವತಿಸಲು ಉದ್ದೇಶಿಸಲಾಗಿದೆ. ಅದಕ್ಕಾಗಿ ಈ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 75 ಜಿಪಸ 2014(ಪಿ), ಬೆಂಗಳೂರು, ದಿನಾಂಕ: 25.11.2015</u>**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಡಿಸೆಂಬರ್'2014ರಿಂದ ಹಿಂದಿನ ಅವಧಿಗೆ ರಾಜ್ಯದ ಐದು ಜಿಲ್ಲೆಗಳಾದ ಬೆಂಗಳೂರು ನಗರ, ಹಾಸನ, ಕೊಡಗು, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ ಬಾಕಿ ಇರುವ 25 ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ದಿನಾಂಕ:19.11.2015ರ ಅಂತ್ಯಕ್ಕೆ ಪಾವತಿಸಲು ಇಮ್ಮಡಿಗೊಳಿಸುವ ಪೂರ್ವದಲ್ಲಿ ಇದ್ದ ಹಾಗು ಇಮ್ಮಡಿಗೊಳಿಸಿದ ನಂತರದ ಬಾಕಿ ಗೌರವಧನದ ಒಟ್ಟು ಮೊತ್ತ ರೂ.53.27 (ರೂಪಾಯಿ ಐವತ್ಮೂರು ಕೋಟಿ ಇಪ್ಪತ್ತೇಳು ಲಕ್ಷಗಳು ಮಾತ್ರ) ಕೋಟಿಗಳ ಪೈಕಿ **ರೂ.33.27 (ರೂಪಾಯಿ ಮೂವತ್ಮೂರು ಕೋಟಿ ಇಪ್ಪತ್ತೇಳು ಲಕ್ಷಗಳು ಮಾತ್ರ) ಕೋಟಿಗಳ ಅನುದಾನವನ್ನು ಒದಗಿಸಲು ಸರ್ಕಾರವು ಹರ್ಷಿಸುತ್ತದೆ.**

ಇನ್ನುಳಿದ ಬಾಕಿ ಮೊತ್ತ ರೂ.20.00 (ರೂಪಾಯಿ ಇಪ್ಪತ್ತು ಕೋಟಿಗಳು ಮಾತ್ರ) ಕೋಟಿಗಳನ್ನು ಮೂರು ಹಂತದ ಪಂಚಾಯತ್ ಸಂಸ್ಥೆಗಳಲ್ಲಿ ವಿವಿಧ ಅರ್ಹ ಯೋಜನೆಗಳಡಿ ವಿನಿಯೋಗವಾಗದೇ ಬಾಕಿ ಉಳಿದಿರುವ ಮೊತ್ತ ಮತ್ತು ಆಕರಣೆಯಾಗಿರುವ ಬಡ್ಡಿ ಮೊತ್ತಗಳಿಂದ ವೆಚ್ಚ ಭರಿಸಿ ಪಾವತಿಸಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/11
(ಎಂ.ಬಿ.ಥೋರತ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು(ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಹಕ ಅಧಿಕಾರಿಗಳ ಮೂಲಕ).
6. ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಕರ್ನಾಟಕ ವಿಕಾಸ/ವೆಬ್‌ಸೈಟ್.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.